"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ(ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

5) ಕರ್ನಾಟಕ ಕೆಲವು ಸರಕುಗಳ ಪ್ರದೇಶದ ಮೇಲೆ ವಿಶೇಷ ತೆರಿಗೆ ವಿಧೇಯಕ, 2004.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಕೆಲವು ಸರಕುಗಳ ಪ್ರದೇಶದ ಮೇಲೆ ವಿಶೇಷ ತೆರಿಗೆ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಕೆಲವು ಸರಕುಗಳ ಪ್ರದೇಶದ ಮೇಲೆ ವಿಶೇಷ ತೆರಿಗೆ ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 15 ರವರೆಗೆ, ಎರಡೂ ಸೇರಿದಂತೆ,

ಪ್ರಸ್ತಾವ ಏನೆಂದರೆ:–

ಅಧ್ಯಕ್ಷರು : "ಖಂಡ 2 ರಿಂದ 15 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 15 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಕೆಲವು ಸರಕುಗಳ ಪ್ರದೇಶದ ಮೇಲೆ ವಿಶೇಷ ತೆರಿಗೆ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಕೆಲವು ಪ್ರದೇಶದ ಮೇಲೆ ವಿಶೇಷ ತೆರಿಗೆ ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

9. ವಿಧೇಯಕ ಮಂಡನೆ ಹಾಗೂ ಪ್ರಸ್ತಾವ.

ಕರ್ನಾಟಕ ವೈದ್ಯಕೀಯ, ದಂತ ವೈದ್ಯಕೀಯ, ಇಂಜಿನಿಯರಿಂಗ್ ವ್ಯಾಸಂಗ ಕ್ರಮಗಳಿಗೆ (ವಿಶೇಷ ಉಪಬಂಧಗಳು) ಪ್ರವೇಶಕ್ಕಾಗಿ ಅಭ್ಯರ್ಥಿಗಳ ಆಯ್ಕೆ ವಿಧೇಯಕ 2004.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ವೈದ್ಯಕೀಯ, ದಂತ ವೈದ್ಯಕೀಯ, ಇಂಜಿನಿಯರಿಂಗ್ ವ್ಯಾಸಂಗ ಕ್ರಮಗಳಿಗೆ (ವಿಶೇಷ ಉಪಬಂಧಗಳು) ಪ್ರವೇಶಕ್ಕಾಗಿ ಅಭ್ಯರ್ಥಿಗಳ ಆಯ್ಕೆ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2004ರ ಕರ್ನಾಟಕ ವೈದ್ಯಕೀಯ, ದಂತ ವೈದ್ಯಕೀಯ, ಇಂಜಿನಿಯರಿಂಗ್ ವ್ಯಾಸಂಗದ ಕ್ರಮಗಳಿಗೆ ವಿಶೇಷ ಉಪಬಂಧಗಳು) ಪ್ರವೇಶಕ್ಕಾಗಿ ಅಭ್ಯರ್ಥಿಗಳ ಆಯ್ಕೆ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಅಧ್ಯಕ್ಷರು : ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

ಶ್ರೀ ಜೆ.ಸಿ. ಮಾಧುಸ್ವಾಮಿ : ಮಾನ್ಯ ಅಧ್ಯಕ್ಷರೆ, ಅವರು ವಿಧೇಯಕವನ್ನು ಮಂಡಿಸಲಿ ಅದರ ಮೇಲೆ ಚರ್ಚೆಯಾಗಬಾರದಾ, ಏಕದಂ ಅಂಗೀಕರಿಸಿಬಿಡುತ್ತಾರಾ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ಮಾನ್ಯ ಅಧ್ಯಕ್ಷರೆ, ಚರ್ಚೆಗೆ ಅವಕಾಶವನ್ನು ಕೊಡಬೇಕು.

ಶ್ರೀ ಜೆ.ಸಿ. ಮಾಧುಸ್ವಾಮಿ : ವಿಧೇಯಕವನ್ನು ಮಂಡಿಸಬೇಕು, ಈ ರೀತಿ ಸಭೆ ನಡೆಸುವುದಾಗಿದ್ದರೆ ಬರಬೇಡಿ ಎಂದು ಹೇಳಿಬಿಡಿ.